# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 32
ಮಾನ್ಯ ಸದಸ್ಯರ ಹೆಸರು : ಶ್ರೀ. ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವವರು : ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು
ಉತ್ತರಿಸಬೇಕಾದ ದಿನಾಂಕ : 15.02.2022

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉದ್ಯೋಗಿನಿ ಯೋಜನೆಯ ವಿವರಗಳೇನು; | ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಉದ್ಯೋಗಿನಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯಡಿ ಮಹಿಳೆಯರು ಆದಾಯ ಉತ್ಪನ್ನಕರ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಸ್ವಯಂ ಉದ್ಯೋಗಿಗಳಾಗಲು ಬ್ಯಾಂಕ್ ಮೂಲಕ ಸಾಲ ಮತ್ತು ನಿಗಮದ ಮೂಲಕ ಸಹಾಯಧನವನ್ನು ನೀಡಲಾಗುತ್ತಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಸಾಲದ ಘಟಕ ವೆಚ್ಚ ಕನಿಷ್ಟ ರೂ.1.00 ಲಕ್ಷದಿಂದ ಗರಿಷ್ಠ ರೂ.3.00 ಲಕ್ಷಗಳು, ಸಹಾಯಧನದ ಮೊತ್ತ 50 ರಷ್ಟು, ಗರಿಷ್ಟ ರೂ.1,50,000/-. ಕುಟುಂಬದ ವಾರ್ಷಿಕ ಆದಾಯದ ಗರಿಷ್ಟ ಮಿತಿ ರೂ.2.00 ಲಕ್ಷಗಳು.<br><br>ಸಾಮಾನ್ಯ ವರ್ಗ ಮತ್ತು ವಿಶೇಷ ವರ್ಗದ ಫಲಾನುಭವಿಗಳಿಗೆ ಸಾಲದ ಘಟಕ ವೆಚ್ಚ ರೂ.1.00ಲಕ್ಷ ರೂ ಗಳಿಂದ ರೂ. 3.00 ಲಕ್ಷಗಳು, ಸಹಾಯಧನದ ಮೊತ್ತ ಶೇ.30 ರಷ್ಟು ಗರಿಷ್ಟ ರೂ.90,000/ ಕುಟುಂಬದ ವಾರ್ಷಿಕ ಆದಾಯದ ಗರಿಷ್ಟ ಮಿತಿ ರೂ.1.50 ಲಕ್ಷಗಳು. 18 ರಿಂದ 55 ವರ್ಷ ವಯೋಮಿತಿ ಹೊಂದಿರುವ ಎಲ್ಲಾ ವರ್ಗದ ಮಹಿಳೆಯರು ಆರ್ಥಿಕ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ. |
| ಆ) | ಸದರಿ ಇಲಾಖೆಯಲ್ಲಿ ಉದ್ಯೋಗಿನಿ ಫಲಾನುಭವಿಗಳ ಆಯ್ಕೆ ಮಾಡುವ ಸಮಿತಿ ಇದೆಯೇ:ಇದ್ದಲ್ಲಿ, ಕಳೆದ ಮೂರು ವರ್ಷಗಳ ಆಯ್ಕೆ ಸಮಿತಿ ನಡೆಸಿದ ಸಭೆಯ ನಡವಳಿಗಳನ್ನು ನೀಡುವುದು: | ಉದ್ಯೋಗಿನಿ ಯೋಜನೆಯಡಿ ಫಲಾನುಭವಿಗಳ ಆಯ್ಕೆ ಮಾಡುವ ಸಮಿತಿ ಇರುತ್ತದೆ.<br>• 2018-19ನೇ ಸಾಲಿನಲ್ಲಿ ಉದ್ಯೋಗಿನಿ ಯೋಜನೆಯಡಿ ಬಸವಕಲ್ಯಾಣ, ಹುಮನಾಬಾದ್, ಬೀದರ್ ಉತ್ತರ ಮತ್ತು ದಕ್ಷಿಣ ಹಾಗೂ ಬಾಲ್ಕಿ ಮತಕ್ಷೇತ್ರಗಳಲ್ಲಿ ಆಯ್ಕೆ ಸಮಿತಿ ನಡೆಸಿರುವುದಾಗಿ ತಿಳಿಸಿರುತ್ತಾರೆ ಆದರೆ ಯಾವುದೇ ಸಭಾ ನಡವಳಿಗಳನ್ನು ಸಲ್ಲಿಸಿರುವುದಿಲ್ಲ.<br>• ಕೋವಿಡ್-19 ಪ್ರಯುಕ್ತ ಲಾಕ್ ಡೌನ್ ಇದ್ದುದರಿಂದ 2019-20 ಮತ್ತು 2020-21ನೇ ಸಾಲುಗಳಲ್ಲಿ ಆಯ್ಕೆ ಸಮಿತಿ ಸಭೆ ನಡೆಸದೆ ಫಲಾನುಭವಿಗಳ ಆಯ್ಕೆ ಪಟ್ಟಿಯನ್ನು ಮಾನ್ಯ ಶಾಸಕರಿಂದ ಪಡೆದಿರುತ್ತಾರೆ.<br>• ಉದ್ಯೋಗಿನಿ ಯೋಜನೆಯ ಮಾರ್ಗಸೂಚಿಯನ್ವಯ ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ಮಾಡಿರುವುದರಿಂದ ಈಗಾಗಲೇ ಸಂಬಂಧಪಟ್ಟ ಅಧಿಕಾರಿಗಳಿಗೆ ಕಾರಣ ಕೇಳುವ ನೋಟಿಸ್‌ನ್ನು ನೀಡಲಾಗಿದೆ. |

| | | |
|---|---|---|
| ಇ) | ಆಯ್ಕೆ ಸಮಿತಿಗೆ ವಿಧಾನ ಪರಿಷತ್ ಸದಸ್ಯರು ಸದಸ್ಯರಾಗಿರುತ್ತಾರೆಯೇ; ಇದ್ದಲ್ಲಿ, ಕಳೆದ ಮೂರು ವರ್ಷಗಳಿಂದ ಆಯ್ಕೆ ಸಮಿತಿ ಸಭೆಗೆ ಸದಸ್ಯರುಗಳನ್ನು ಆಹ್ವಾನಿಸದಿರುವುದಕ್ಕೆ ಕಾರಣವೇನು? (ವಿವರ ನೀಡುವುದು) | ಫಲಾನುಭವಿಗಳ ಆಯ್ಕೆ ಸಮಿತಿಗೆ ತಾಲ್ಲೂಕಿನಲ್ಲಿ ಖಾಯಂ ಆಗಿ ವಾಸಿಸುತ್ತಿರುವ ಮಾನ್ಯ ವಿಧಾನ ಪರಿಷತ್ ಸದಸ್ಯರು ಸದಸ್ಯರಿರುತ್ತಾರೆ.<br><br>• 2018–19ನೇ ಸಾಲಿನಲ್ಲಿ ಉದ್ಯೋಗಿನಿ ಯೋಜನೆಯಡಿ ಫಲಾನುಭವಿಗಳ ಆಯ್ಕೆ ಸಮಿತಿ ಸಭೆ ನಡೆಸದೆ ಇರುವುದರಿಂದ ಸಭೆಗೆ ಸದಸ್ಯರನ್ನು ಆಹ್ವಾನಿಸಿರುವುದಿಲ್ಲ.<br>• ಕೋವಿಡ್–19 ಪ್ರಯುಕ್ತ ಲಾಕ್ ಡೌನ್ ಇದ್ದುದರಿಂದ 2019–20 ಮತ್ತು 2020–21ನೇ ಸಾಲುಗಳಲ್ಲಿ ಆಯ್ಕೆ ಸಮಿತಿ ಸಭೆಗೆ ಸದಸ್ಯರುಗಳನ್ನು ಆಹ್ವಾನಿಸಿರುವುದಿಲ್ಲ. ಉದ್ಯೋಗಿನಿ ಯೋಜನೆಯ ಮಾರ್ಗಸೂಚಿಯನ್ವಯ ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ಮಾಡಿರುವುದರಿಂದ ಈಗಾಗಲೇ ಸಂಬಂಧಪಟ್ಟ ಅಧಿಕಾರಿಗಳಿಗೆ ಕಾರಣ ಕೇಳುವ ನೋಟಿಸ್‌ನ್ನು ನೀಡಲಾಗಿದೆ. |

ಮಮಇ/16/ಮಅನಿ/2022

Halappa B A

(ಹಾಲಪ್ಪ ಬಸಪ್ಪ ಆಚಾರ್)
ಮಾನ್ಯ ಗಣಿ ಮತ್ತು ಭೂವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ ಹಾಗೂ ಹಿರಿಯ
ನಾಗರೀಕರ ಸಬಲೀಕರಣ ಸಚಿವರು.